FEBRUARY 25,2025
ALL INDIA RADIO- DHARWAD
PRADESH SAMACHARA (KANNADA) 12PM

<><><>

ಆಕಾಶವಾಣಿ

ಪ್ರದೇಶ ಸಮಾಚಾರ

ಓದಿದವವರು: ವಿವೇಕಾದಿತ್ಯ ಕನಿಯಾಲ

<><><>

ಭದ್ರಾ ಮೇಲ್ದಂಡೆ ಯೋಜನೆ ಕಾಮಗಾರಿಗೆ, 3 ಸಾವಿರ ಕೋಟಿ ರೂಪಾಯಿ ಅನುದಾನ ಮೀಸಲಿಡುವಂತೆ, ಹಣಕಾಸು ಖಾತೆಯನ್ನೂ ಹೊಂದಿರುವ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ, ಮನವಿ ಮಾಡಲಾಗಿದೆ ಎಂದು, ಸಾಂಖ್ಯಿಕ ಮತ್ತು ಯೋಜನಾ ಖಾತೆ ಸಚಿವ, ಡಿ. ಸುಧಾಕರ್ ತಿಳಿಸಿದ್ದಾರೆ. ಚಿತ್ರದುರ್ಗದ ಪತ್ರಿಕಾ ಭವನದಲ್ಲಿ ಆಯೋಜಿಸಲಾದ, ಜಿಲ್ಲಾ ನೀರಾವರಿ ಅನು ಷ್ಠಾನ ಸಮಿತಿ ಮತ್ತು ಜನ ಪ್ರತಿನಿಧಿಗಳ ಸಭೆಯಲ್ಲಿ, ಅವರು ಮಾತನಾಡಿದರು. ಕೇಂದ್ರ ಸರ್ಕಾರ ಭದ್ರಾ ಯೋಜನೆಯನ್ನು, ರಾಷ್ಟ್ರೀಯ ಕಾಮಗಾರಿಯಾಗಿ ಘೋಷಿಸಿ, 5 ಸಾವಿರದ 300 ಕೋಟಿ ರೂಪಾಯಿ ಅನುದಾನ ಬಿಡುಗಡೆ ಮಾಡಿದಲ್ಲಿ, 2028ರ ವೇಳೆಗೆ, ಪೂರ್ಣಗೊಳಿಸಲು ಸಾಧ್ಯವಿದೆ ಎಂದರು.

<><><>

ಮಹಾಶಿವರಾತ್ರಿ ಅಂಗವಾಗಿ, ಧಾರವಾಡದ ಮಂಗಳವಾರಪೇಟೆಯ ಮುದಿಮಾರುತಿ ದೇವಸ್ಥಾನದಲ್ಲಿ ನಾಳೆ ಸಂಜೆ 6 ಗಂಟೆಗೆ, 49 ನೇ ವರ್ಷದ ಶಿವಸ್ಫೂರ್ತಿ ಮಹಾಶಿವರಾತ್ರಿ ಸಂಗೀತೋತ್ಸವ ಹಾಗೂ ಪ್ರಶಸ್ತಿ ಪ್ರದಾನ ಸಮಾರಂಭ ಆಯೋಜಿಸಲಾಗಿದೆ. ಈ ಬಗ್ಗೆ ಪ್ರದೇಶ ಸಮಾಚಾರಕ್ಕಾಗಿ ಹೆಚ್ಚಿನ ಮಾಹಿತಿ ನೀಡಿದ್ದಾರೆ ಕಾರ್ಯಕ್ರಮ ಸಂಚಾಲಕ, ರಂಗಕರ್ಮಿ ವೀರಣ್ಣ ಪತ್ತಾರ ಅವರು..

<><><>

ಬೈಟ್: ವೀರಣ್ಣ ಪತ್ತಾರ್ 35 ಸೆಕೆಂದುಗಳು

<><><>

ಮುಧೋಳ ಕ್ಷೇತ್ರದ ಅಭಿವೃದ್ಧಿಗೆ ಸರ್ಕಾರವು ಕಟಬದ್ಧವಾಗಿದೆ. ಮುಧೋಳಕ್ಕೆ ಬೈಪಾಸ್ ರಸ್ತೆಯನ್ನು ನಿರ್ಮಿಸಲಾಗುತ್ತಿದೆ. ರನ್ನ ವೃತ್ತದ ಅಭಿವೃದ್ಧಿ, ಜಡಗಾ–ಬಾಲಾ ಮೂರ್ತಿಗಳ ಲೋಕಾರ್ಪಣೆ ಶೀಘ್ರದಲ್ಲಿ ನಡೆಯಲಿದೆ ಎಂದು ಅಬಕಾರಿ ಇಲಾಖೆ ಹಾಗೂ ಬಾಗಲಕೋಟೆ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ ತಿಮ್ಮಾಪೂರ ಹೇಳಿದರು. ರನ್ನ ವೈಭವದ ಸಮಾರೋಪ ಸಮಾರಂಭದಲ್ಲಿ, ರನ್ನ ಪ್ರತಿ ಷ್ಠಾನದ 'ರನ್ನ ಹಳೆಗನ್ನಡ ಪ್ರಶಸ್ತಿ' ಪ್ರದಾನ ಮಾಡಿ, ಶ್ರೀಮುಕುಟ ಗ್ರಂಥವನ್ನು ಲೋಕಾರ್ಪಣೆಗೊಳಿಸಿ ಅವರು ಮಾತನಾಡಿದರು. ರನ್ನ ವೈಭವ ಕಾರ್ಯಕ್ರಮದಂಗವಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಶುಭಾಶಯ ವಿಡಿಯೋ ಸಂದೇಶವನ್ನು ಬಿತ್ತರಿಸಲಾಯಿತು.

<><><>

ರಸ್ತೆ ಕಾಮಗಾರಿ ಸರ್ವೇ ಕಾರ್ಯದಂಗವಾಗಿ, ಇಂದು ಉತ್ತರ ಕನ್ನಡ ಜಿಲ್ಲೆ ಹೊನ್ನಾವರ ತಾಲೂಕಿನ ರಾಷ್ಟ್ರೀಯ ಹೆದ್ದಾರಿ–66 ಸಮೀಪದ, ಹಿರೇಮಠ ಸ್ಮಶಾನದಿಂದ, ಕಾಸರಕೋಡ ಗ್ರಾಮ ವ್ಯಾಪ್ತಿ ಪ್ರದೇಶದಲ್ಲಿ ನಿಷೇಧಾಜ್ಞೆ ಜಾರಿಗೊಳಿಸಲಾಗಿದೆ. ಕಾನೂನು ಸುವ್ಯವಸ್ಥೆ ಕಾಪಾಡುವ ನಿಟ್ಟಿನಲ್ಲಿ ಇಂದು ಬೆಳಗ್ಗೆ 6 ಗಂಟೆಯಿಂದ ರಾತ್ರಿ 9 ಗಂಟೆಯವರೆಗೆ ನಿಷೇಧಾಜ್ಞೆ ಜಾರಿಯಲ್ಲಿರಲಿದೆ ಎಂದು ಜಿಲ್ಲಾಧಿಕಾರಿ ಕೆ. ಲಕ್ಷ್ಮೀಪ್ರಿಯಾ ತಿಳಿಸಿದ್ದಾರೆ.

<><><>

ಕನ್ನಡ ನಾಡಿನ ಜನಪದ ಪರಂಪರೆಯ ಸಂವರ್ಧನೆ, ಪ್ರಸರಣ, ದಾಖಲಾತಿ ಹಾಗೂ ಪ್ರಚಾರ ಆಶಯಗಳನ್ನು ಇರಿಸಿಕೊಂಡ, ಯುನೆಸ್ಕೋ ಮಾನ್ಯತೆ ಪಡೆದ ಕರ್ನಾಟಕ ಜಾನಪದ ಪರಿಷತ್ತಿಗೆ, ಶ್ರೀ ಇಡಗುಂಜಿ ಮಹಾಗಣಪತಿ ಯಕ್ಷಗಾನ ಮಂಡಳಿ ಕೊಡಮಾಡುವ, ಕೆರೆಮನೆ ಶಿವರಾಮ ಹೆಗಡೆ ರಾಷ್ಟ್ರೀಯ ಪ್ರಶಸ್ತಿಯನ್ನು ಪ್ರದಾನಿಸಲಾಯಿತು. ಹೊನ್ನಾವರ ತಾಲೂಕು ಗುಣವಂತೆಯಲ್ಲಿ ಜರುಗಿದ ರಾಷ್ಟ್ರೀಯ ನಾಟ್ಯೋತ್ಸವ ಕಾರ್ಯಕ್ರಮದಲ್ಲಿ ಕರ್ನಾಟಕ ಜಾನಪದ ಪರಿಷತ್ತಿನ ಅಧ್ಯಕ್ಷರಾದ ಪ್ರೊಫೆಸರ್ ಹಿ.ಚಿ ಬೋರಲಿಂಗಯ್ಯ ಅವರು ಪ್ರಶಸ್ತಿ ಸ್ವೀಕರಿಸಿದರು.

<><><>

ಕಲಬುರಗಿ ಜಿಲ್ಲೆ ಕಾಳಗಿ ತಾಲೂಕು ಕೋರವಾರ ಗ್ರಾಮದ ಶ್ರೀ ಅಣಿವೀರಭದ್ರೇಶ್ವರ ದೇವಸ್ಥಾನ ಜಾತ್ರಾ ಮಹೋತ್ಸವವು ನಾಳೆಯಿಂದ ಆರಂಭವಾಗಲಿದೆ. 28 ರಂದು ರಾತ್ರಿ 8 ಗಂಟೆಗೆ ಭವ್ಯ ರಥೋತ್ಸವ ಜರುಗಲಿದೆ.

<><><>

ಪುರಾಣ ಪ್ರಸಿದ್ಧ ಗೋಕರ್ಣ ಶ್ರೀ ಮಹಾಬಲೇಶ್ವರ ಕ್ಷೇತ್ರದಲ್ಲಿ ನಾಳೆ ಮಹಾಶಿವರಾತ್ರಿ ಹಾಗೂ 28 ರಂದು ಮಹಾರಥೋತ್ಸವ ಜರುಗಲಿದೆ. ಶಿವರಾತ್ರಿ ಅಂಗವಾಗಿ ಮುರುಡೇಶ್ವರದಲ್ಲಿ ಅಹೋರಾತ್ರಿ ಜಾಗರಣೋತ್ಸವ ನಡೆಯಲಿದೆ. ಸಂಜೆ 6 ಗಂಟೆಗೆ ಆರಂಭಗೊಳ್ಳುವ ಸಂಗೀತ ರಸಮಂಜರಿ ಕಾರ್ಯಕ್ರಮದಲ್ಲಿ ಗಾಯಕ ರಘು ದೀಕ್ಷಿತ್ ಪಾಲ್ಗೊಳ್ಳಲಿದ್ದಾರೆ.

<><><>

ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಪ್ರವಾಸೋದ್ಯಮ ಇಲಾಖೆ ಹಾಗೂ ವಿಜಯನಗರ ಜಿಲ್ಲಾಡಳಿತದ ಸಹಯೋಗದಲ್ಲಿ ಆಯೋಜಿಸಲಾಗುತ್ತಿರುವ ಹಂಪಿ ಉತ್ಸವ –2025, 28 ನೇ ತಾರೀಖಿನಿಂದ ಮೂರು ದಿನಗಳ ಕಾಲ ಜರುಗಲಿದೆ. ಶುಕ್ರವಾರ ಸಂಜೆ 6 ಗಂಟೆಗೆ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹಂಪಿ ಉತ್ಸವವನ್ನು ಉದ್ಘಾಟಿಸಲಿದ್ದಾರೆ. ಮಾರ್ಚ್ 2 ರ ವರೆಗೆ ಹಂಪಿ ಉತ್ಸವ ನಡೆಯಲಿದೆ.

<><><>

ಪ್ರತಿ ವರ್ಷ ಬೇಸಿಗೆಯಲ್ಲಿ, ಕಲಬುರಗಿ ಜಿಲ್ಲೆಯಾದ್ಯಂತ, ಕುಡಿಯುವ ನೀರಿನ ಸಮಸ್ಯೆ ತಲೆದೋರುತ್ತಿದ್ದು, ತಾಲೂಕಾವಾರು ಸಮಗ್ರ ಕ್ರಿಯಾ ಯೋಜನೆ ರೂಪಿಸಿ ಸಲ್ಲಿಸುವಂತೆ, ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ, ಜಿಲ್ಲಾಡಳಿತಕ್ಕೆ ಸೂಚಿಸಿದ್ದಾರೆ. ಜಿಲ್ಲಾ ಪಂಚಾಯ್ತಿ ಸಭಾಂಗಣದಲ್ಲಿ, ಬೇಸಿಗೆಯಲ್ಲಿ ಸಮರ್ಪಕ ಕುಡಿಯುವ ನೀರು ಮತ್ತು ಜಾನುವಾರುಗಳಿಗೆ ಮೇವು ಪೂರೈಸುವ ನಿಟ್ಟಿನಲ್ಲಿ, ಹಿಂದಿನ 5 ವರ್ಷಗಳಲ್ಲಿ ಸಮಸ್ಯೆ ತಲೆದೋರಿದ ಪ್ರದೇಶಗಳನ್ನು ಗಮನದಲ್ಲಿಟ್ಟುಕೊಂಡು, ಯೋಜನೆ ರೂಪಿಸುವಂತೆ, ಸಚಿವರು ವಿವಿಧ ಇಲಾಖೆಗಳ ಅಧಿಕಾರಿಗಳಿಗೆ ನಿರ್ದೇಶಿಸಿದರು.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 1 ಗಂಟೆ 10 ನಿಮಿಷಕ್ಕೆ..